3. ಪಶುವೈದ್ಯ ಸಹಾಯಕರು : ನೇರ ನೇಮಕಾತಿ ಮೂಲಕ 642 ಪಶು ವೈದ್ಯ ಸಹಾಯಕರ ಹುದ್ದೆಗಳನ್ನು ನೇಮಕಾತಿ ಮಾಡಲು ಅನುಮತಿ ನೀಡಲಾಗಿದ್ದು, ನೇಮಕಾತಿ ಮಾಡುವ ಸಂದರ್ಭದಲ್ಲಿ ಆಳಂದ ತಾಲ್ಲೂಕಿನ ಖಾಲಿ ಇರುವ ಹುದ್ದೆಗಳನ್ನು ಆದ್ಯತೆ ಮೇರೆಗೆ ತುಂಬಲು ಕ್ರಮ ವಹಿಸಲಾಗುವುದು,

4. 'ಡಿ ದರ್ಜೆ' ನೌಕರರು : ಖಾಲಿ ಇರುವ 'ಡಿ ದರ್ಜೆ' ಹುದ್ದೆಗಳನ್ನು ಆದ್ಯತೆ ಮೇರೆಗೆ ಜಿಲ್ಲಾ ಉಪ ನಿರ್ದೇಶಕರ ಮುಖಾಂತರ ಹೊರ ಗುತ್ತಿಗೆ ಆಧಾರದ ಮೇರೆಗೆ ತುಂಬಲು ಕ್ರಮ ವಹಿಸಲಾಗುವುದು.

ಶಿಕ್ಷಕರ ಸಂಖ್ಯೆ ಮತ್ತು ಕೊರತೆ

816 (1342) ಶ್ರೀ ಸುಭಾಷ್ ಆರ್. ಗುತ್ತೇದಾರ್ (ಆಳಂದ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಳಂದ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲೆಯಲ್ಲಿರುವ ಶಿಕ್ಷಕರ ಸಂಖ್ಯೆ ಎಷ್ಟು (ವಿವರ ನೀಡುವುದು);

ಆ) ಈ ಶಾಲೆಗಳಲ್ಲಿ ವಿಜ್ಞಾನ, ಗಣಿತ, ಆಂಗ್ಲ ಭಾಷೆಗಳಿಗೆ ಶಿಕ್ಷಕರು ಇಲ್ಲದೆ ಇರುವ ಶಾಲೆಗಳು ಎಷ್ಟು (ವಿವರ ನೀಡುವುದು);

ಇ) ಈ ವಿಷಯಗಳಲ್ಲಿ ಅಭ್ಯಾಸ ವಂಚಿತ ವಿದ್ಯಾರ್ಥಿಗಳ ಗುಣಮಟ್ಟದ ಬಗ್ಗೆ ಸರ್ಕಾರ ಕೈಗೊಂಡಿರು ಕ್ರಮಗಳೇನು; (ವಿವರಣೆ ನೀಡುವುದು);

ಈ) ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ)

- ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಮಂಜೂರಾದ ಹುದ್ದೆ ಒಟ್ಟು 1593. ಕಾರ್ಯನಿರ್ವಗಿಸುತ್ತಿರುವ ಶಿಕ್ಷಕರ ಸಂಖ್ಯೆ 1539. ಖಾಲಿ ಇರುವ ಹುದ್ದೆಗಳ ಸಂಖ್ಯೆ 54

- ಸರ್ಕಾರಿ ಪ್ರೌಢಶಾಲೆಗಳಲ್ಲಿ ಮಂಜೂರಾದ ಹುದ್ದೆ 406. ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ 376, ಖಾಲಿ ಇರುವ ಹುದ್ದೆಗಳ ಸಂಖ್ಯೆ 30

ಆ)

- ಸರ್ಕಾರಿ ಪ್ರೌಢಶಾಲೆಗಳಲ್ಲಿ ವಿಜ್ಞಾನ, ಇಂಗ್ಲೀಷ್ ಹಾಗೂ ಪಿ.ಸಿ.ಎಂ. ಹುದ್ದೆಗಳು ಅನುಕ್ರಮವಾಗಿ 10, 08 ಹಾಗೂ 12 ಖಾಲಿ ಇರುತ್ತವೆ.
- ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ವಿಜ್ಞಾನ, ಗಣಿತ, ಆಂಗ್ಲ ಭಾಷೆಗಳಿಗೆ ಶಿಕ್ಷಕರ ಹುದ್ದೆಗಳು ಖಾಲಿ ಇರುವುದಿಲ್ಲ.

ಇ) ಮಕ್ಕಳ ಶೈಕ್ಷಣಿಕ ಪ್ರಗತಿಗೆ ಧಕ್ಕೆಯಾಗದಂತೆ ಸರ್ಕಾರದ ಆದೇಶದ ಸಂಖ್ಯೆ ಇಡಿ 294 ಎಲ್‌ಬಿಪಿ 2009 ರ ಪ್ರಕಾರ ಈ ಖಾಲಿ ಹುದ್ದೆಗಳು ನೇರ ನೇಮಕಾತಿಯ ಮೂಲಕ ಭರ್ತಿಯಾಗುವವರೆಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿದೆ.

ಈ)

- ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ 2581 ಹುದ್ದೆಗಳನ್ನು ಭರ್ತಿ ಮಾಡಲು (ಆಳಂದ ತಾ., 30 ಹುದ್ದೆಗಳು) ಆಯ್ಕೆಯಾದ ಶಿಕ್ಷಕರ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ದಿನಾಂಕ: 26.04.2010 ರಿಂದ 30.04.2010 ರವರೆಗೆ ಕೌನ್ಸಿಲಿಂಗ್ ಮೂಲಕ ನೇಮಕಾತಿ ಆದೇಶಗಳನ್ನು ಜಾರಿ ಮಾಡಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.
- ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ 4928 ಹುದ್ದೆಗಳನ್ನು (ಆಳಂದ ತಾ., 54 ಹುದ್ದೆಗಳು) ಭರ್ತಿ, ಮಾಡಲು ಆಯ್ಕೆಯಾದ ಶಿಕ್ಷಕರ ಅಂತಿಮ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ದಿನಾಂಕ: 08.03.2010 ರಿಂದ 12.03.2010 ರವರೆಗೆ ಕೌನ್ಸಿಲಿಂಗ್ ಮೂಲಕ ನೇಮಕಾತಿ ಆದೇಶಗಳನ್ನು ಜಾರಿ ಮಾಡಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.